ಕರ್ನಾಟಕದಲ್ಲಿ ಸಿಗುವ ಭತ್ತದ ಹುಲ್ಲಿನಿಂದ ಪೇಪರ್ ತಯಾರಿಸುವ ಕಾರ್ಖಾನೆಯನ್ನು ಸ್ಥಾಪಿಸುವುದು

೧೩೮೫. ಶ್ರೀ ಸಿ. ಎಂ. ಉದಾಸಿ, (ಹಾನ್‌ಗಲ್).—ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಸಿಗುವ ಭತ್ತದ ಹುಲ್ಲಿನಿಂದ ಕಾಗದತಯಾರಿಸುವ ಕಾರ್ಖಾನೆಯನ್ನು ಸ್ಥಾಪಿಸುವ ಸಲಹೆ ಏನಾದರೂ ಸರ್ಕಾರದವರಲ್ಲಿದೆಯೇ ?

ಆ) ಹಾಗಿದ್ದಲ್ಲಿ, ಅದನ್ನು ಯಾವಾಗ ಹಾಗೂ ಎಲ್ಲಿ ಸ್ಥಾಪಿಸಲಾಗುವುದು ?

ಶ್ರೀ ಜೆ. ಹೆಚ್. ಪಟೇಲ್ (ಭಾರಿ ಹಾಗೂ ಮಧ್ಯಮ ಕೈಗಾರಿಕಾ ಮಂತ್ರಿಗಳು).—

ಅ) ಇಲ್ಲ.

ಆ) ಮೇಲಿನ ಉತ್ತರದಲ್ಲಿ ಇದು ಉದ್ಭವಿಸುವುದಿಲ್ಲ.

ಹಾವೇರಿ ತಾಲ್ಲೂಕಿನಲ್ಲಿ ಸರ್ಕಾರೀ ಕೈಗಾರಿಕೆಗಳನ್ನು ಪ್ರಾರಂಭಿಸುವ ಬಗ್ಗೆ.

೧೩೮೪. ಶ್ರೀ ಸಿ. ಸಿ. ಕಲಕೋಟಿ, (ಹಾವೇರಿ).—ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ದಯವಿಟ್ಟು ಉತ್ತರಿಸುವರೆ ?

ಅ) ಹಾವೇರಿ ತಾಲ್ಲೂಕಿನಲ್ಲಿ ಸರಕಾರಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಆಲೋಚಿಸಿದೆಯೇ ?

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಜೆ. ಹೆಚ್. ಪಟೇಲ್ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು).—

ಅ) ಇಲ್ಲ.

ಆ) ಇದು ಉದ್ಭವಿಸುವುದಿಲ್ಲ,

ದೇವನಹಳ್ಳಿ ತಾಲ್ಲೂಕಿನಲ್ಲಿ ಕೈಗಾರಿಕಾ ಎಸ್ಟೇಟನ್ನು ಪ್ರಾರಂಭಿಸುವುದು

೧೩೮೬. ಶ್ರೀ ಪಿ. ಸಿ. ಮುನಿಸ್ವಾಮಯ್ಯ (ದೇವನಹಳ್ಳಿ).—ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ದಯವಿಟ್ಟು ಉತ್ತರಿಸುವರೆ ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿ ಈವರೆಗೆ ಯಾವುದೇ ಸರ್ಕಾರಿ ಸಣ್ಣ ಅಥವಾ ಮಧ್ಯಮ ಪ್ರಮಾಣದ ಕೈಗಾರಿಕೆಯನ್ನು ಪ್ರಾರಂಭಿಸಿಲ್ಲವೆಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ದೇವನಹಳ್ಳಿ ತಾಲ್ಲೂಕಿನ ದೇವನಹಳ್ಳಿ ಮತ್ತು ವಿಜಯಪುರ ಪಟ್ಟಣಗಳ ಬಳಿ ಸೂಕ್ತ ಜಮೀನು ದೊರೆತರೆ ಕೈಗಾರಿಕಾ ಕ್ಷೇತ್ರವನ್ನು ಸ್ಥಾಪಿಸಲು ಅಥವಾ ಕನಿಷ್ಟಪಕ್ಷ ಕೈಗಾರಿಕಾ ಮಳಿಗೆಗಳನ್ನು ನಿರ್ಮಿಸಲು ಸರ್ಕಾರದವರು ಕ್ರಮ ತೆಗೆದು ಕೊಳ್ಳುವರೆ ?

ಶ್ರೀ ಜೆ. ಹೆಚ್. ಪಟೇಲ್ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು).—

ಅ) ಹೌದು.

ಆ) ಬೆಂಗಳೂರು ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರಕಾರ ಪ್ರೋತ್ಸಾಹ ನೀಡುತ್ತಿಲ್ಲ.